**All India Radio: Bangalore**
**National Bulletins In Kannada**
**11.07.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**11.07.2025 / 19.35 hrs**
**<><*<><>*><>**

**ಮುಖ್ಯಾಂಶಗಳು**

೧. **ಒಂದು ದೇಶ, ಒಂದು ಚುನಾವಣೆ; ದೆಹಲಿಯಲ್ಲಿಂದು ನಡೆದ ಜಂಟಿ ಸಂಸದೀಯ ಸಮಿತಿ ಸಭೆ**

೨. **ಇ-ಟ್ರಕ್‌ಗಳಿಗೆ ಆರ್ಥಿಕ ಉತ್ತೇಜನ ನೀಡುವ ಯೋಜನೆ ಉದ್ಘಾಟಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ**

೩. **ವಿಂಬಲ್ಡನ್ ಟೆನಿಸ್; ಸೆಮಿಫೈನಲ್ಸ್‌ನಲ್ಲಿ ಸೆರ್ಬಿಯಾದ ನೊವಾಕ್ ಜೋಕೊವಿಚ್- ಇಟಲಿಯ ಜಾನಿಕ್ ಸಿನ್ನರ್ ಮುಖಾಮುಖಿ**

೪. **ಲಾರ್ಡ್ಸ್ ಟೆಸ್ಟ್ ಕ್ರಿಕೆಟ್; ೩೮೭ ರನ್‌ಗಳಿಗೆ ಇಂಗ್ಲೆಂಡ್ ಸರ್ವಪತನ; ಇನ್ನಿಂಗ್ಸ್ ಆರಂಭಿಸಿದ ಭಾರತ**

**<><*<><>*><>**

ಒಂದು ದೇಶ, ಒಂದು ಚುನಾವಣೆ ಕುರಿತ ಜಂಟಿ ಸಂಸದೀಯ ಸಮಿತಿ ಸಭೆ ದೆಹಲಿಯಲ್ಲಿಂದು ನಡೆಯಿತು. ೩೯ ಸದಸ್ಯರನ್ನು ಒಳಗೊಂಡಿರುವ ಈ ಸಮಿತಿಯಲ್ಲಿ, ೨೭ ಸದಸ್ಯರು ಲೋಕಸಭೆ ಹಾಗೂ ೧೨ ಮಂದಿ ರಾಜ್ಯಸಭೆಯನ್ನು ಪ್ರತಿನಿಧಿಸಿದ್ದಾರೆ. ಸಂವಿಧಾನದ ೧೨೯ನೇ ತಿದ್ದುಪಡಿ ಮಸೂದೆಯ ಭಾಗವಾಗಿ, ಜಂಟಿ ಸಂಸದೀಯ ಸಮಿತಿ ಚರ್ಚೆ ನಡೆಸುತಿದ್ದು, ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸುವ ಸಾಧಕ-ಬಾಧಕಗಳ ಬಗ್ಗೆ ಪರಿಶೀಲಿಸಿತು. ಬಿಜೆಪಿ ಸಂಸದ ಪಿ.ಪಿ.ಚೌಧರಿ ನೇತೃತ್ವದ ಸಮಿತಿ, ಕಾನೂನು ತಜ್ಞರ ಜೊತೆಯೂ ಚರ್ಚಿಸಿತು. ಸಭೆಯಲ್ಲಿ ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾದ ಜಸ್ಟಿಸ್ ಜಗದೀಶ್ ಸಿಂಗ್ ಕೆಹರ್ ಹಾಗೂ ಜಸ್ಟಿಸ್ ಡಿ.ವೈ.ಚಂದ್ರಚೂಡ್ ಅವರು ಸಮಿತಿಗೆ ಏಕಕಾಲಕ್ಕೆ ಚುನಾವಣೆ ನಡೆಸುವ ಸಾಧ್ಯಾಸಾಧ್ಯತೆಗಳ ಬಗ್ಗೆ ಪ್ರಾತ್ಯಕ್ಷಿಕೆ ನೀಡಿದರು. ಬಿಜೆಪಿ ಸಂಸದ ಅನುರಾಗ್ ಠಾಕೂರ್, ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಸಮಾಜವಾದಿ ಪಕ್ಷದ ಧರ್ಮೇಂದ್ರ ಯಾದವ್ ಮತ್ತಿತರರು ಸಭೆಯಲ್ಲಿ ಪಾಲ್ಗೊಂಡಿದ್ದರು.

**<><*<><>*><>**

ದೇಶದಾದ್ಯಂತ ನಾಳೆ ೪೭ ಸ್ಥಳಗಳಲ್ಲಿ ೧೬ ನೇ ಉದ್ಯೋಗ ಮೇಳ ನಡೆಯಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಉದ್ಯೋಗಿಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ನೇಮಕಗೊಂಡವರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.  ದೇಶಾದ್ಯಂತ ಆಯ್ಕೆಯಾದ ಹೊಸ ನೇಮಕಾತಿದಾರರು ರೈಲ್ವೆ, ಗೃಹ ವ್ಯವಹಾರಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಕಾರ್ಮಿಕ ಮತ್ತು ಉದ್ಯೋಗ ಹಾಗೂ ಅಂಚೆ ಇಲಾಖೆ ಸೇರಿದಂತೆ ಇತರ ಇಲಾಖೆಗಳು ಮತ್ತು ಸಚಿವಾಲಯಗಳಿಗೆ ಸೇರಲಿದ್ದಾರೆ. ದೇಶಾದ್ಯಂತ ಉದ್ಯೋಗ ಮೇಳಗಳ ಮೂಲಕ ಇಲ್ಲಿಯವರೆಗೆ ಹತ್ತು ಲಕ್ಷಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ನೀಡಲಾಗಿದೆ.ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ಪ್ರಧಾನಿಯವರ ಬದ್ಧತೆಗೆ ಈ ಮೇಳ ಒಂದು ಹೆಜ್ಜೆಯಾಗಿದೆ. ಯುವಜನತೆಯ ಸಬಲೀಕರಣ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಅವರ ಭಾಗವಹಿಸುವಿಕೆಗಾಗಿ ಅರ್ಥಪೂರ್ಣ ಅವಕಾಶಗಳನ್ನು ಒದಗಿಸುವಲ್ಲಿ ಈ ಉದ್ಯೋಗ ಮೇಳ ಮಹತ್ವದ ಪಾತ್ರ ವಹಿಸುತ್ತದೆ.

**<><*<><>*><>**

ಸರಕು ಸಾಗಾಣೆ ವಲಯದಲ್ಲಿ ಇಂಗಾಲದ ಹೊರಸೂಸುವಿಕೆಯನ್ನು ಶೂನ್ಯಮಟ್ಟಕ್ಕೆ ಇಳಿಸುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿರುವ ಪ್ರಧಾನಿ ನರೇಂದ್ರ ಮೋದಿ ಸರ್ಕಾರ, ಇದೇ ಮೊದಲ ಬಾರಿಗೆ ವಿದ್ಯುತ್ ಚಾಲಿತ ಟ್ರಕ್ ಅಂದರೆ ಇ-ಟ್ರಕ್‌ಗಳಿಗೆ ಆರ್ಥಿಕ ಉತ್ತೇಜನ ನೀಡುವ ಯೋಜನೆಯನ್ನು ಆರಂಭಿಸಿದೆ. ದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ

ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ, ಈ ಯೋಜನೆಯನ್ನು ಪ್ರಕಟಿಸಿದರು. ಪಿಎಂ ಇ-ಡ್ರೈವ್ ಯೋಜನೆಯಡಿ ಟ್ರಕ್‌ಗಳಿಗೆ ಪ್ರೋತ್ಸಾಹ ಧನ ನೀಡಲಾಗುವುದು. ಸಾಮೂಹಿಕ ಸಾರಿಗೆ ಹಾಗೂ ಸರಕು ಸಾಗಣೆ ವ್ಯವಸ್ಥೆಯಲ್ಲಿ ಇಂಗಾಲದ ಹೊರಸೂಸುವಿಕೆಯನ್ನು ಪರಿಪೂರ್ಣವಾಗಿ ತಗ್ಗಿಸುವ ನಿಟ್ಟಿನಲ್ಲಿ ಈ ಯೋಜನೆ ಸಹಕಾರಿಯಾಗಲಿದೆ. ಸ್ವಚ್ಛ, ದಕ್ಷ ಮತ್ತು ಸುಸ್ಥಿರ ಸರಕು ಸಾಗಣೆಗೆ ಪೂರಕವಾಗಿ ಪರಿವರ್ತನಾತ್ಮಕ ಹೆಜ್ಜೆಗಳನ್ನು ಇಡಲಾಗಿದೆ. ಕೇಂದ್ರ ಸರ್ಕಾರವು ವಿದ್ಯುತ್ ಟ್ರಕ್‌ಗಳಿಗೆ ನೇರ ಆರ್ಥಿಕ ಪ್ರೋತ್ಸಾಹ ನೀಡುತ್ತಿರುವುದು ಇದೇ ಮೊದಲು ಎಂದರು. ಒಟ್ಟು ವಾಹನಗಳ ಸಂಖ್ಯೆಯಲ್ಲಿ ಡೀಸೆಲ್ ಟ್ರಕ್‌ಗಳು, ಕೇವಲ ಶೇಕಡಾ ೩ ರಷ್ಟಿದ್ದರೂ, ಶೇಕಡಾ ೪೨ ರಷ್ಟು ವಾಯು ಮಾಲಿನ್ಯಕ್ಕೆ ಕಾರಣವಾಗಿವೆ. ಬರುವ ೨೦೭೦ರ ವೇಳೆಗೆ ಇಂಗಾಲದ ನಿವ್ವಳ ಹೊರಸೂಸುವಿಕೆಯನ್ನು ಶೂನ್ಯಕ್ಕೆ ಇಳಿಸುವ ಗುರಿಯನ್ನು ಮುಟ್ಟಲಿದ್ದೇವೆ ಎಂದು ಹೇಳಿದರು.

<><*<><>*><>

ದೇಶದಲ್ಲಿ ಹಳೆಯ ಕಾರು ಮಾರುಕಟ್ಟೆ ವ್ಯಾಪಕವಾಗಿ ಬೆಳವಣಿಗೆಯಾಗುತ್ತಿದ್ದು, ಪ್ರಸಕ್ತ ಹಣಕಾಸು ವರ್ಷದಲ್ಲಿ ೬೦ ಲಕ್ಷ ಕಾರುಗಳು ಮಾರಾಟವಾಗುವ ನಿರೀಕ್ಷೆಯಿದೆ ಎಂದು ಕ್ರಿಸಿಲ್ ರೇಟಿಂಗ್ಸ್ ಸಂಸ್ಥೆ ತಿಳಿಸಿದೆ. ಈ ಕ್ಷೇತ್ರ, ವಾರ್ಷಿಕ ಶೇಕಡ ೮ ರಿಂದ ೧೦ ರಷ್ಟು ಬೆಳವಣಿಗೆ ಸಾಧಿಸುತ್ತಿದ್ದು, ಹೊಸ ಕಾರುಗಳ ಮಾರಾಟಕ್ಕಿಂತಲೂ ವೇಗವಾದ ಪ್ರಗತಿ ಕಾಣುತ್ತಿದೆ. ವಾರ್ಷಿಕ ೪ ಲಕ್ಷ ಕೋಟಿ ರೂಪಾಯಿ ಮೊತ್ತದ ಕಾರುಗಳು ಮಾರಾಟವಾಗುತ್ತಿವೆ. ಕಾರು ಖರೀದಿಗೆ ಸಾಲ ಸೌಲಭ್ಯ ಕೂಡ ದೊರೆಯುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಹಳೆಯ ಕಾರುಗಳ ಖರೀದಿಗೆ ಜನ ಆಸಕ್ತರಾಗುತ್ತಿದ್ದಾರೆ ಎಂದು ವರದಿ ತಿಳಿಸಿದೆ.

<><*<><>*><>

ದೋಷಪೂರಿತ ಹಾಗೂ ಕ್ರಮಬದ್ಧವಾಗಿ ಅಳವಡಿಸದ ಫಾಸ್ಟ್ ಟ್ಯಾಗ್‌ಗಳನ್ನು ಕಪ್ಪು ಪಟ್ಟಿಗೆ ಸೇರಿಸಲು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತೀರ್ಮಾನಿಸಿದೆ. ಹೆದ್ದಾರಿಗಳಲ್ಲಿ ಸುಗಮ ಮತ್ತು ಸುಲಲಿತ ಸಂಚಾರಕ್ಕಾಗಿ ಈ ಕ್ರಮ ಕೈಗೊಳ್ಳುತ್ತಿದ್ದು, ಇದರಿಂದ ಇತರ ವಾಹನ ಸವಾರರಿಗೆ ಕಿರಿಕಿರಿಯಾಗುವುದನ್ನು ತಪ್ಪಿಸಬಹುದಾಗಿದೆ ಎಂದು ತಿಳಿಸಿದೆ. ಇಂತಹ ದೋಷಪೂರಿತ ಫಾಸ್ಟ್ ಟ್ಯಾಗ್‌ಗಳು ಕಂಡುಬಂದಲ್ಲಿ, ಟೋಲ್ ಸಂಗ್ರಹ ಸಂಸ್ಥೆಗಳು ಹೆದ್ದಾರಿ ಪ್ರಾಧಿಕಾರದ ಗಮನಕ್ಕೆ ತರುವಂತೆ ಸೂಚಿಸಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ಇಂದು ಸದೃಢ ಮತ್ತು ಅಭಿವೃದ್ಧಿ ಹೊಂದಿದ ದೇಶವಾಗಿ ಮುನ್ನಡೆಯುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಧಾರವಾಡ ಜಿಲ್ಲೆಯ ಕುಂದಗೋಳದಲ್ಲಿ ಎನ್.ಡಿ.ಎ ಸರ್ಕಾರದ 'ವಿಕಸಿತ ಭಾರತ ಸಂಕಲ್ಪ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರದ ಸಾಧನೆಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ. ಇಂದು ಆರ್ಥಿಕತೆಯಲ್ಲಿ ಭಾರತ ಜಗತ್ತಿನ ನಾಲ್ಕನೇ ಅತಿ ದೊಡ್ಡ ರಾಷ್ಟ್ರವಾಗಿದೆ. ಬೀದಿ ಬದಿ ವ್ಯಾಪಾರಿಯಿಂದ ಹಿಡಿದು ಅಂತರಾಷ್ಟ್ರೀಯ ಮಟ್ಟದವರೆಗೂ ಡಿಜಿಟಲ್ ವ್ಯಾಪಾರ ವಹಿವಾಟು ನಡೆಯುತ್ತಿದು, ಇದು ನಮ್ಮ ದೇಶದ ಸಾಧನೆಗೆ ಹಿಡಿದ ಕೈಗನ್ನಡಿಯಾಗಿದೆ. ಆಪರೇಷನ್ ಸಿಂಧೂರ್ ಮೂಲಕ ಇಡೀ ವಿಶ್ವಕ್ಕೆ ಭಾರತ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ರಾಮಮಂದಿರ ನಿರ್ಮಾಣದಿಂದ ಹಿಡಿದು ಕಾಶಿ ವಿಶ್ವನಾಥ್ ಕಾರಿಡಾರ್, ಮಹಾಕಾಲ್ ಯೋಜನೆವರೆಗೆ ಮಹೋನ್ನತ ಸಂಸ್ಕೃತಿಯ ವೈಭವನ್ನು ಸಾರುತ್ತಿದೆ ಎಂದರು.

<><*<><>*><>

ಹತ್ತಿ ಕೃಷಿಯಲ್ಲಿನ ಸಮಸ್ಯೆಗಳು, ಸಸ್ಯದ ಮೇಲೆ ಪರಿಣಾಮ ಬೀರುವ ರೋಗಗಳು, ನೇಕಾರರು ಮತ್ತು ಕೃಷಿ ಉದ್ಯಮಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಕೇಂದ್ರ ಸರ್ಕಾರ ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ಕೊಯಮತ್ತೂರಿನ ಐಸಿಎಆರ್ ಸಂಶೋಧನಾ ಕೇಂದ್ರಕ್ಕೆ ಇಂದು ಭೇಟಿ ನೀಡಿ, ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕೃಷಿಗೆ ಸಂಬಂಧಿಸಿದ ಪ್ರತಿಯೊಂದು ಸಮಸ್ಯೆಯ ಬಗ್ಗೆಯೂ ಸರ್ಕಾರ ಕಾಳಜಿ ವಹಿಸುತ್ತದೆ. ಸಂಶೋಧನಾ ಚಟುವಟಿಕೆಯನ್ನು ಉತ್ತೇಜಿಸುವ ಜೊತೆಗೆ, ಹತ್ತಿ ಕೃಷಿ ಮತ್ತು ಮೌಲ್ಯವರ್ಧಿತ ಉತ್ಪನ್ನಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಕಾರ್ಯೋನ್ಮುಖವಾಗಿದೆ. ಹತ್ತಿ ಕೃಷಿಯ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಕೀಟಗಳನ್ನು ನಿರ್ಮೂಲನೆ ಮಾಡುವ ಸಂಶೋಧನೆಗೆ ಒತ್ತು ನೀಡಲಾಗಿದೆ ಎಂದರು.

<><*<><>*><>

ಛತ್ತೀಸ್‌ಗಢದ ನಾರಾಯಣಪುರ ಜಿಲ್ಲೆಯಲ್ಲಿಂದು ೨೨ ಮಾವೋವಾದಿಗಳು ಪೊಲೀಸರ ಮುಂದೆ ಶರಣಾಗಿದ್ದಾರೆ. ಈ ಮಾವೋವಾದಿಗಳ ಮೇಲೆ ಒಟ್ಟು ೩೭ ಲಕ್ಷದ ೫೦ ಸಾವಿರ ರೂಪಾಯಿ ಬಹುಮಾನ ಘೋಷಿಸಲಾಗಿತ್ತು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಬಿನ್ಸನ್ ಗುರಿಯಾ ಹೇಳಿದ್ದಾರೆ. ಶರಣಾದ ಮಾವೋವಾದಿಗಳಿಗೆ ಛತ್ತೀಸ್‌ಗಢ ಸರ್ಕಾರದ ಹೊಸ ಪುನರ್ವಸತಿ ನೀತಿಯಡಿಯಲ್ಲಿ ತಲಾ ೫೦ ಸಾವಿರ ರೂಪಾಯಿಗಳ ಪ್ರೋತ್ಸಾಹ ಧನ ಮತ್ತು ಇತರ ಸೌಲಭ್ಯಗಳನ್ನು ನೀಡಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಲಂಡನ್‌ನಲ್ಲಿ ಇನ್ನು ಸ್ವಲ್ಪ ಹೊತ್ತಿನಲ್ಲಿ ನಡೆಯಲಿರುವ ವಿಂಬಲ್ಡನ್ ಟೆನಿಸ್‌ನ ಪುರುಷರ ಸಿಂಗಲ್ಸ್ ಸೆಮಿಫೈನಲ್ಸ್ ನಲ್ಲಿ, ಆರನೇ ಶ್ರೇಯಾಂಕಿತ ಮತ್ತು ಏಳು ಬಾರಿಯ ಚಾಂಪಿಯನ್ ಸರ್ಬಿಯಾದ ನೊವಾಕ್ ಜೊಕೊವಿಚ್ ಅವರು, ಇಟಲಿಯ ಅಗ್ರ ಶ್ರೇಯಾಂಕಿತ ಜಾನಿಕ್ ಸಿನ್ನರ್ ಅವರನ್ನು ಎದುರಿಸಲಿದ್ದಾರೆ. ಮತ್ತೊಂದು ಸೆಮಿಫೈನಲ್ಸ್‌ನಲ್ಲಿ ಎರಡನೇ ಶ್ರೇಯಾಂಕಿತ ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್- ಐದನೇ ಶ್ರೇಯಾಂಕಿತ ಅಮೆರಿಕಾದ ಟೇಲರ್ ಫ್ರಿಟ್ಜ್ ಪರಸ್ಪರ ಮುಖಾಮುಖಿಯಾಗಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ, ಐದು ಬಾರಿಯ ಗ್ರ್ಯಾಂಡ್ ಸ್ಲ್ಯಾಮ್ ಚಾಂಪಿಯನ್ ಇಗಾ ಸ್ವಿಯೆಟೆಕ್ ನಾಳೆ ೧೩ ನೇ ಶ್ರೇಯಾಂಕಿತ ಅಮಂಡಾ ಅನಿಸಿಮೊವಾ ಅವರೊಂದಿಗೆ ನಾಳೆ ಪ್ರಶಸ್ತಿ ಸುತ್ತಿನಲ್ಲಿ ಹಣಾಹಣಿಗೆ ಸಜ್ಜಾಗುತ್ತಿದ್ದಾರೆ.

**<><*<><>*><>**

ಲಂಡನ್ ಲಾರ್ಡ್ಸ್ ನಲ್ಲಿ ನಡೆಯುತ್ತಿರುವ ಭಾರತ ಇಂಗ್ಲೆಂಡ್ ನಡುವಿನ ಮೂರನೇ ಟೆಸ್ಟ್ ಪಂದ್ಯ ೨ನೇ ದಿನದಾಟ ಪ್ರಗತಿಯಲ್ಲಿದೆ. ಇಂಗ್ಲೆಂಡ್ ಮೊದಲ ಇನ್ನಿಂಗ್ಸ್‌ನಲ್ಲಿ ೩೮೭ ರನ್‌ಗಳಿಗೆ ಆಲೌಟ್ ಆಯಿತು. ಜೋರೋಟ್ ಆಕರ್ಷಕ ಶತಕ ಗಳಿಸಿದರು. ಭಾರತರ ಪರ ಜಸ್ಪ್ರೀತ್ ಬೂಮ್ರಾ ೫ ವಿಕೆಟ್, ನಿತೀಶ್ ಕುಮಾರ್ ರೆಡ್ಡಿ ಹಾಗೂ ಮೊಹಮ್ಮದ್ ಸಿರಾಜ್ ತಲಾ ೨ ಮತ್ತು ರವೀಂದ್ರ ಜಡೇಜಾ ೧ ವಿಕೆಟ್ ಉರುಳಿಸಿದರು. ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ ಇತ್ತೀಚಿನ ವರದಿ ಬಂದಾಗ ೧ ವಿಕೆಟ್ ನಷ್ಟಕ್ಕೆ ೨೦ ರನ್ ಗಳಿಸಿ ಆಡುತ್ತಿದೆ. ಐದು ಪಂದ್ಯಗಳ ಸರಣಿಯಲ್ಲಿ ಭಾರತ, ಇಂಗ್ಲೆಂಡ್ ೧-೧ರ ಸಮಬಲದಲ್ಲಿದ್ದು, ಈ ಪಂದ್ಯದಲ್ಲಿ ಸರಣಿ ಮುನ್ನಡೆ ಸಾಧಿಸಲು ಉಭಯ ದೇಶಗಳು ಉತ್ಸಾಹದಲ್ಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**